(ಗೊಂದಲ)

(ಇ) ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ವಿಧೇಯಕ, 2007
ಪರ್ಯಾಲೋಚನಾ ಪ್ರಸ್ತಾವ

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :– ಮಾನ್ಯ ಅಧ್ಯಕ್ಷರೆ, 2007 ರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನೆಯನ್ನು ಮಂಡಿಸಲಾಯಿತು

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ, " 2007 ರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಅಧ್ಯಕ್ಷರು :– "ಖಂಡ 2 ರಿಂದ 28 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 28 ರವರೆಗೆ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ :

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವ ಅಂಗೀಕಾರ

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :– ಮಾನ್ಯ ಅಧ್ಯಕ್ಷರೆ, 2007 ರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ, " 2007 ರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

5. ಪ್ರಕಟಣೆ

ಅಧ್ಯಕ್ಷರು :– ಮಾನ್ಯ ವಸತಿ ಸಚಿವರಾದ ಡಿ.ಟಿ. ಜಯಕುಮಾರ್‌ರವರು ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮಧ್ಯಾಹ್ನ ಒಂದೂವರೆ ಗಂಟೆಗೆ ಭೋಜನ ಕೂಟವನ್ನು ಏರ್ಪಡಿಸಿದ್ದಾರೆ, ಎಲ್ಲಾ ಮಾನ್ಯ ಸದಸ್ಯರು ಭಾಗವಹಿಸಬೇಕೆಂದು ವಿನಂತಿ ಮಾಡಿದ್ದಾರೆ.

(ಈಗ ಸದನವನ್ನು ಮಧ್ಯಾಹ್ನ ಎರಡೂವರೆ ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.)

(ಪುನಃ ಮಧ್ಯಾಹ್ನ ಎರಡು ಗಂಟೆಗೆ ಸೇರುವಂತೆ ಸದನವನ್ನು ಮಧ್ಯಾಹ್ನ ಒಂದುಗಂಟೆ ಹತ್ತೊಂಬತ್ತು ನಿಮಿಷಕ್ಕೆ ಮುಂದೂಡಲಾಯಿತು)

(ಸಭೆಯು ಮಧ್ಯಾಹ್ನ 3 : 05 ಗಂಟೆಗೆ ಪ್ರಾರಂಭವಾದಾಗ ಮಾನ್ಯ ಅಧ್ಯಕ್ಷರು ಅಧ್ಯಕ್ಷ ಪೀಠದಲ್ಲಿ ಉಪಸ್ಥಿತರಿದ್ದರು)